**Akashvani : Bangalore**
**Regional Bulletin In Kannada**
**04.09.2025 : 14.30hrs**
**ಆಕಾಶವಾಣಿ ಬೆಂಗಳೂರು**
**ಪ್ರದೇಶ ಸಮಾಚಾರ**
**04.09.2025 : 14.30 hrs**
******

**ಮುಖ್ಯಾಂಶಗಳು :**

1. ಕೋಲಾರದ ಕೆ.ಸಿ. ವ್ಯಾಲಿ ಎರಡನೇ ಹಂತದ ಯೋಜನೆ ಲೋಕಾರ್ಪಣೆ
2. ಜಿಎಸ್‌ಟಿ ಕಡಿತ - ದೇಶದ ಜನತೆಗೆ ಕೇಂದ್ರ ಸರ್ಕಾರದಿಂದ ದೀಪಾವಳಿ ಉಡುಗೊರೆ - ಕೇಂದ್ರ ಸಚಿವ ಎಚ್ ಡಿ ಕುಮಾರಸ್ವಾಮಿ
3. ಕೇಂದ್ರ ಸರ್ಕಾರದಿಂದ ಜಿಎಸ್‌ಟಿ ಪರಿಷ್ಕರಣೆ; ಸಚಿವ ಪ್ರಿಯಾಂಕ್ ಖರ್ಗೆ ಆಕ್ಷೇಪ
4. ಇಂದು ರಾಜ್ಯ ಸಚಿವ ಸಂಪುಟ ಸಭೆ - ಬೆಂಗಳೂರು ಸೇರಿ ರಾಜ್ಯಾದ್ಯಂತ ಕಟ್ಟಡಕ್ಕೆ ಓಸಿ - ಸಿಸಿ ವಿನಾಯ್ತಿ ನೀಡುವ ಬಗ್ಗೆ ಚರ್ಚೆ ಸಾಧ್ಯತೆ

*******

ಸಂಸ್ಕರಿಸಿದ ಬೆಂಗಳೂರಿನ ತ್ಯಾಜ್ಯ ನೀರನ್ನು ೪೪೬ ಕೋಟಿ ವೆಚ್ಚದಲ್ಲಿ ಲಕ್ಷ್ಮೀ ಸಾಗರ ಪಂಪ್ ಹೌಸ್ ನಿಂದ ಕೋಲಾರ ಜಿಲ್ಲೆಯ ೩೦ ಕೆರೆಗಳಿಗೆ ನೀರು ತುಂಬಿಸುವ ಕೆ.ಸಿ.ವ್ಯಾಲಿ ಎರಡನೇ ಹಂತದ ಯೋಜನೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ವರ್ಚುವಲ್ ಮೂಲಕ ಇಂದು ಲೋಕಾರ್ಪಣೆಗೊಳಿಸಿದರು. ಈ ವೇಳೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ, ಕೆ.ಸಿ.ವ್ಯಾಲಿ ಯೋಜನೆಯ ಮೊದಲನೇ ಹಂತ ಬಹಳ ಯಶಸ್ವಿಯಾಗಿದೆ. ಕೆ.ಸಿವ್ಯಾಲಿ ಯೋಜನೆ ಎರಡನೇ ಹಂತದಲ್ಲಿ ತ್ಯಾಜ್ಯ ನೀರನ್ನು ಸಂಸ್ಕರಿಸಿ ಕೋಲಾರ ಜಿಲ್ಲೆಯ ೩೦ ಕೆರೆಗಳಿಗೆ ನೀರು ತುಂಬಿಸುವ ಯೋಜನೆ ಇದಾಗಿದೆ. ಕೆರೆ ತುಂಬಿಸಿದ ವ್ಯಾಪ್ತಿಯಲ್ಲಿ ಅಂತರ್ಜಲ ಮಟ್ಟ ಹೆಚ್ಚಾಗಿದೆ. ಈ ಹಿಂದೆ ಸುಮಾರು ೧೨೦೦ ರಿಂದ ೧೫೦೦ ಅಡಿಗೆ ಬೋರ್‌ವೆಲ್ ನೀರು ದೊರೆಯುತ್ತಿತ್ತು. ಈಗ ಸುಮಾರು ೪೫೦ ಅಡಿಗೆ ನೀರು ದೊರೆಯುತ್ತಿರುವುದು ಸಂತಸದ ವಿಷಯ ಎಂದು ಹೇಳಿದರು. ಕೆ.ಸಿವ್ಯಾಲಿ ಯೋಜನೆ ಎರಡನೇ ಹಂತ ಡಿಸೆಂಬರ್ ವೇಳೆಗೆ ಪೂರ್ಣಗೊಳ್ಳಲಿದ್ದು, ಸುಮಾರು ೨೭೨ ಕೆರೆಗಳಿಗೆ ನೀರು ತುಂಬಿಸುವಂತಾಗಲಿದೆ. ಕೋಲಾರ ಜಿಲ್ಲೆಯಲ್ಲಿ ಯಾವುದೇ ಶಾಶ್ವತ ನದಿಗಳು, ನೀರಾವರಿ ಯೋಜನೆ ಇಲ್ಲದ ಕಾರಣ ಈ ಯೋಜನೆಯಿಂದ ಬಹಳ ಅನುಕೂಲವಾಗಲಿದೆ ಎಂದರು. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾತನಾಡಿ, ಕೆ.ಸಿ.ವ್ಯಾಲಿ ಯೋಜನೆಗೆ ಎರಡು ಹಂತಗಳಲ್ಲಿ ಸುಮಾರು ೩೯೫ ಕೆರೆಗಳಿಗೆ ಸಂಸ್ಕರಿಸಿದ ನೀರು ತುಂಬಿಸಲಾಗುವುದು. ಜಿಲ್ಲೆಯ ಆಯಾ ತಾಲೂಕುಗಳಲ್ಲಿ ಶಾಸಕರು ಕೆರೆಗಳಿಗೆ ಭೇಟಿ ನೀಡಿ ಪರಿಶೀಲಿಸಬೇಕು ಎಂದು ತಿಳಿಸಿದರು.

*******

ಜಿಎಸ್‌ಟಿ ವ್ಯವಸ್ಥೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಕ್ರಾಂತಿಕಾರಿ ಬದಲಾವಣೆ ಜಾರಿಗೆ ತಂದಿದ್ದು, ಐತಿಹಾಸಿಕ ದೀಪಾವಳಿ ಉಡುಗೊರೆ ನೀಡಿದ್ದಾರೆ ಎಂದು ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವ ಎಚ್.ಡಿ. ಕುಮಾರಸ್ವಾಮಿ ತಿಳಿಸಿದ್ದಾರೆ. ಈ ಬಗ್ಗೆ ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿರುವ ಅವರು ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯು ಮುಂದಿನ ಪೀಳಿಗೆಯ ಜಿಎಸ್‌ಟಿ ಸುಧಾರಣೆಯನ್ನು ಅನುಮೋದಿಸಿದೆ. ಇದು ಜನಜೀವನ ಸುಲಭಗೊಳಿಸುವುದು ಮತ್ತು ಆತ್ಮನಿರ್ಭರಭಾರತ್ ಅನ್ನು ಬಲಪಡಿಸುವ ಒಂದು ಪರಿವರ್ತನಾತ್ಮಕ ಹೆಜ್ಜೆಯಾಗಿದೆ ಎಂದು ಹೇಳಿದ್ದಾರೆ. ಉದ್ಯಮಗಳು ಹಾಗೂ ಸಣ್ಣ ಮತ್ತು ಮಧ್ಯಮ ಗಾತ್ರದ ಕೈಗಾರಿಕೆಗಳು ಭಾರೀ ಉತ್ತೇಜನ ಪಡೆಯಲಿವೆ ಎಂದು ಸಂತಸ ವ್ಯಕ್ತಪಡಿಸಿದ್ದಾರೆ.

*******

ಕೇಂದ್ರ ಸರ್ಕಾರ ೬೪ ಪ್ರತಿಶತ ಜಿಎಸ್‌ಟಿಯನ್ನು ಬಡವರು ಮತ್ತು ಮಧ್ಯಮ ವರ್ಗದವರಿಂದ ಸಂಗ್ರಹಿಸುತ್ತಿದೆ. ಕೇವಲ ಮೂರು ಪ್ರತಿಶತ ಜಿಎಸ್‌ಟಿಯನ್ನು ಕೋಟ್ಯಾಧಿಪತಿಗಳಿಂದ ಸಂಗ್ರಹಿಸಲಾಗುತ್ತಿದೆ ಎಂದು ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ದೂರಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕರ್ನಾಟಕದಂತಹ ರಾಜ್ಯಗಳಿಗೆ ಆಗಿರುವ ನಷ್ಟವನ್ನು ಹೇಗೆ ಸರಿದೂಗಿಸುತ್ತಾರೆ ಎಂಬುದನ್ನು ಇನ್ನು ಲೆಕ್ಕಾಚಾರ ಮಾಡಿಲ್ಲ ಎಂದು ಹೇಳಿದ್ದಾರೆ. ಇದೇ ವೇಳೆ ಕಳೆದ ೮ ವರ್ಷಗಳ ಹಳೆಯ ಪರೋಕ್ಷ ತೆರಿಗೆ ಪದ್ಧತಿಯ ಪರಿಷ್ಕರಣೆಗೆ ಅವರು ಆಕ್ಷೇಪ ವ್ಯಕ್ತಪಡಿಸಿದ್ದಾರೆ.

*******

ಕೇಂದ್ರ ಸರ್ಕಾರ ಜಿಎಸ್‌ಟಿ ಕಡಿತಗೊಳಿಸಿರುವುದರಿಂದ ಇನ್ನು ಮುಂದೆ ಹಲವು ವಸ್ತುಗಳು ಅಗ್ಗವಾಗಲಿದೆ. ವಿಶೇಷವಾಗಿ ವೈಯಕ್ತಿಕ ಆರೋಗ್ಯ, ಜೀವವಿಮೆ ಪಾಲಿಸಿ ಅಗ್ಗವಾಗಲಿದೆ. ಸಾಬೂನು, ಶಾಂಪು ಸೇರಿದಂತೆ ಹಲವು ವಸ್ತುಗಳ ಮೇಲಿನ ತೆರಿಗೆ ಶೇಕಡ ೫ಕ್ಕೆ ಇಳಿಯಲಿದೆ. ಕಾರುಗಳು ಇನ್ನು ಮುಂದೆ ಅಗ್ಗವಾಗಲಿವೆ. ಈ ಕುರಿತಂತೆ ಪ್ರತಿಕ್ರಿಯಿಸಿರುವ ಹಿರಿಯ ಆರ್ಥಿಕ ತಜ್ಞ ನಾರಾಯಣ ಯಾಜಿ, ಇದೊಂದು ಕೇಂದ್ರ ಸರ್ಕಾರದ ಕ್ರಾಂತಿಕಾರಕ ನಿರ್ಣಯ ಎಂದು ಬಣ್ಣಿಸಿದ್ದಾರೆ.

*****ಧ್ವನಿ**** ನಾರಾಯಣ ಯಾಜಿ

ಆಕಾಶವಾಣಿಯೊಂದಿಗೆ ಮಾತನಾಡಿದ ಪತ್ರಕರ್ತರಾದ ಅರ್ಪಣಾ ನಟರಾಜ್, ಕೇಂದ್ರ ಸರ್ಕಾರದ ಈ ನಿರ್ಧಾರವನ್ನು ಸ್ವಾಗತಿಸಿದ್ದಾರೆ.

*****ಧ್ವನಿ**** ಅರ್ಪಣಾ ನಟರಾಜ್

*******

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ವಿಧಾನಸೌಧದಲ್ಲಿಂದು ಸಚಿವ ಸಂಪುಟ ಸಭೆ ನಡೆಯುತ್ತಿದೆ. ಸಭೆಯಲ್ಲಿ ಗ್ರೇಟರ್ ಬೆಂಗಳೂರು ವ್ಯಾಪ್ತಿ ಹಾಗೂ ರಾಜ್ಯಾದ್ಯಂತ ಕೆಲವರ್ಗದ ಕಟ್ಟಡಗಳಿಗೆ ಸ್ವಾಧೀನಾನುಭವ ಪತ್ರ ಹಾಗೂ ನಿರ್ಮಾಣ ಕಾರ್ಯಾರಂಭ ಪತ್ರಗಳಿಂದ ವಿನಾಯಿತಿ ನೀಡುವ ಕುರಿತಂತೆ ಚರ್ಚೆ ನಡೆಯಲಿದೆ. ಮೆಟ್ರೋ ೩ನೇ ಹಂತದ ಯೋಜನೆಯಡಿ ಜೆಪಿ ನಗರ ೪ನೇ ಹಂತದಿಂದ ಹೆಬ್ಬಾಳದ ವರೆಗೆ, ಹೊಸಹಳ್ಳಿಯಿಂದ ಮಾಗಡಿ ರಸ್ತೆಯ ಕಡಬಗೆರೆ ವರೆಗೆ ಮೆಟ್ರೋ ಮಾರ್ಗ ನಿರ್ಮಾಣವಾಗಲಿದ್ದು, ಡಬಲ್ ಡೆಕ್ಕರ್ ರಸ್ತೆ ನಿರ್ಮಾಣ ಯೋಜನೆಗೂ ಸಂಪುಟ ಒಪ್ಪಿಗೆ ಪಡೆಯುವ ಸಾಧ್ಯತೆ ಇದೆ.

*******

ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಸಿ. ಮಹದೇವಪ್ಪ ಮತ್ತು ಮೈಸೂರು ಜಿಲ್ಲಾಡಳಿತ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ನಾಡಹಬ್ಬ ಮೈಸೂರು ದಸರಾ ಉದ್ಘಾಟನಾ ಕಾರ್ಯಕ್ರಮದ ಆಹ್ವಾನ ನೀಡಿದರು. ಬಳಿಕ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ದಸರಾ ಉತ್ಸವಕ್ಕೆ ಆಗಮಿಸುವಂತೆ ಮೈಸೂರು ಜಿಲ್ಲಾಧಿಕಾರಿ ಲಕ್ಷ್ಮೀಕಾಂತ ರೆಡ್ಡಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿ ಮುಖೇಶ್ ಕುಮಾರ್ ನೇತೃತ್ವದ ನಿಯೋಗವು ವಿಧಾನಸೌಧದಲ್ಲಿಂದು ಆಹ್ವಾನ ನೀಡಿತು.

*******

ಮಾಜಿ ರಾಷ್ಟ್ರಪತಿ ಸರ್ವಪಲ್ಲಿ ರಾಧಾಕೃಷ್ಣ ಅವರ ಹುಟ್ಟುಹಬ್ಬದ ಹಿನ್ನೆಲೆಯಲ್ಲಿ ನಾಳೆ ದೇಶದೆಲ್ಲೆಡೆ ಶಿಕ್ಷಕರ ದಿನಾಚರಣೆಯನ್ನು ಆಚರಿಸಲಾಗುತ್ತದೆ. ದಾವಣಗೆರೆಯಲ್ಲಿ ನಾಳೆ ಶಿಕ್ಷಕರ ದಿನಾಚರಣೆ ಹಮ್ಮಿಕೊಳ್ಳಲಾಗಿದ್ದು, ಇದರ ಅಂಗವಾಗಿ ೧೮ ಶಿಕ್ಷಕರಿಗೆ ಜಿಲ್ಲಾ ಮಟ್ಟದ ಶಿಕ್ಷಕ ಪ್ರಶಸ್ತಿ ನೀಡಿ ಗೌರವಿಸಲಾಗುತ್ತಿದೆ ಎಂದು ಸಾರ್ವಜನಿಕ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಕೊಟ್ರೇಶಪ್ಪ ತಿಳಿಸಿದ್ದಾರೆ. ಹಾವೇರಿ ಜಿಲ್ಲೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ೨೩ ಶಿಕ್ಷಕರಿಗೆ ೨೦೨೫-೨೬ನೇ ಸಾಲಿನ ಜಿಲ್ಲಾ ಮಟ್ಟದ ಅತ್ಯುತ್ತಮ ಪ್ರಶಸ್ತಿ ಘೋಷಿಸಲಾಗಿದೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಮೋಹನ ದಂಡಿನ ತಿಳಿಸಿದ್ದಾರೆ. ಕೋಲಾರ ಜಿಲ್ಲೆಯ ಪ್ರತಿ ತಾಲ್ಲೂಕಿನಲ್ಲಿ ಪ್ರಾಥಮಿಕ, ಹಿರಿಯ ಪ್ರಾಥಮಿಕ ಮತ್ತು

ಪ್ರೌಢಶಾಲಾ ವಿಭಾಗಗಳಿಂದ ಒಟ್ಟು ೧೮ ಮಂದಿ ಶಿಕ್ಷಕರು ಜಿಲ್ಲಾ ಅತ್ಯುತ್ತಮ ಶಿಕ್ಷಕ ಪ್ರಶಸ್ತಿಗೆ ಭಾಜನರಾಗಿದ್ದಾರೆ. ಕೋಲಾರ ನಗರದ ಟಿ. ಚೆನ್ನಯ್ಯ ರಂಗಮಂದಿರದಲ್ಲಿ ನಾಳೆ ನಡೆಯುವ ಶಿಕ್ಷಕರ ದಿನಾಚರಣೆ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ನಡೆಯಲಿದೆ.

*******

ಹಾವೇರಿ ಜಿಲ್ಲೆಯಲ್ಲಿ ಗಣೇಶ ಹಬ್ಬ ಹಾಗೂ ಈದ್ ಮಿಲಾದ್ ಹಬ್ಬಗಳ ಮೆರವಣಿಗೆ ಸಂದರ್ಭದಲ್ಲಿ ಡಿ.ಜೆ. ನಿರ್ಬಂಧಿಸಿ ಆದೇಶ ಹೊರಡಿಸಲಾಗಿದೆ. ಈ ಸಂಬಂಧ ಸಾಮಾಜಿಕ ಮಾಧ್ಯಮಗಳಲ್ಲಿ ಯಾರಾದರೂ ತಪ್ಪು ಸಂದೇಶ ಹರಿಬಿಟ್ಟರೆ, ಅಂಥವರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಯಶೋಧಾ ವಂಟಗೋಡಿ ತಿಳಿಸಿದ್ದಾರೆ. ಮೆರವಣಿಗೆಯಲ್ಲಿ ಧ್ವನಿವರ್ಧಕಗಳನ್ನು ಬಳಸಲು ಸಂಬಂಧಪಟ್ಟ ಪೊಲೀಸ್ ಠಾಣೆಯಿಂದ ಅನುಮತಿ ಪಡೆಯಬೇಕು. ಸಾರ್ವಜನಿಕರು ಶಾಂತಿಯುತವಾಗಿ ಹಬ್ಬ ಆಚರಣೆ ಮಾಡಬೇಕು ಎಂದು ತಿಳಿಸಿದ್ದಾರೆ.

*******

ಮೀನುಗಾರಿಕೆ ಇಲಾಖೆಯಿಂದ ೨೦೨೫-೨೬ ನೇ ಸಾಲಿಗೆ ರಾಜ್ಯ ವಲಯ ವಿಶೇಷ ಘಟಕ ಮತ್ತು ಗಿರಿಜನ ಉಪಯೋಜನೆಗಳಡಿ ನಾಲ್ಕು ಚಕ್ರ ವಾಹನ ಖರೀದಿಸಲು ಸಹಾಯಧನಕ್ಕಾಗಿ ಅರ್ಹ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಮೀನುಗಾರರಿಂದ ಅರ್ಜಿ ಆಹ್ವಾನಿಸಲಾಗಿದೆ. ನಾಲ್ಕು ಚಕ್ರ ವಾಹನ ಖರೀದಿಗೆ ಶೇಕಡ ೫೦ ರಂತೆ ಗರಿಷ್ಠ ೩ ಲಕ್ಷ ರೂಪಾಯಿವರೆಗೆ ಆರ್ಥಿಕ ನೆರವು ನೀಡಲಾಗುವುದು. ಜಿಲ್ಲೆಗೆ ಪರಿಶಿಷ್ಟ ಜಾತಿಗೆ ೨, ಪರಿಶಿಷ್ಟ ಪಂಗಡಕ್ಕೆ ೧ ಗುರಿ ನಿಗದಿಪಡಿಸಲಾಗಿದೆ. ಅರ್ಹರು ಇದೇ ೨೦ ರೊಳಗೆ ಆಯಾ ತಾಲ್ಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿಗೆ ಅರ್ಜಿ ಸಲ್ಲಿಸಬಹುದು ಎಂದು ಉತ್ತರಕನ್ನಡ ಮೀನುಗಾರಿಕೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

*******

ಯುವನಿಧಿ ಯೋಜನೆಯಡಿ ಪದವೀಧರರು ಮತ್ತು ಡಿಪ್ಲೊಮಾ ವಿದ್ಯಾರ್ಥಿಗಳು ನೋಂದಣಿ ಮಾಡಿಕೊಂಡಿದ್ದು, ಫಲಾನುಭವಿಗಳ ಆಸಕ್ತಿ ಮತ್ತು ಅವರ ಸಾಮರ್ಥ್ಯಕ್ಕೆ ತಕ್ಕಂತೆ ಕೌಶಲ್ಯ ತರಬೇತಿ ನೀಡಲು ಕ್ರಮ ವಹಿಸುವಂತೆ ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಎ.ಬಿ. ಬಸವರಾಜು ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಪದವಿ, ಡಿಪ್ಲೊಮಾ ವಿದ್ಯಾರ್ಥಿಗಳಿಗೆ ಕಲಿಕೆ ಜೊತೆಗೆ ಕೌಶಲ್ಯ ತರಬೇತಿಗಳನ್ನು ನೀಡಿದರೆ ಭವಿಷ್ಯದಲ್ಲಿ ಅವರ ಸಾಮರ್ಥ್ಯಕ್ಕೆ ಅನುಸಾರ ಉದ್ಯೋಗ ಪಡೆಯಲು ಅನುಕೂಲವಾಗುತ್ತದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

******